ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ವಿವರ

ಶ್ರೀ ನಸೀರ್ ಅಹ್ಮದ್(ವಿಧಾನಸಭೆಯಿಂದ ಚುನಾಯಿತರಾದವರು) -

61 (125) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರತಿ ವರ್ಷ ಸ್ನಾತಕೋತ್ತರ ಶಿಕ್ಷಣ ಪಡೆಯಲು ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಶಿಕ್ಷಣ ಸಂಸ್ಥೆಗಳ ಪ್ರವೇಶ ಪಡೆದ ವಿದ್ಯಾರ್ಥಿಗಳಲ್ಲಿ ರಾಜ್ಯದ ವಿದ್ಯಾರ್ಥಿಗಳೆಷ್ಟು ; ಹೊರ ರಾಜ್ಯದ ವಿದ್ಯಾರ್ಥಿಗಳೆಷ್ಟು; (ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿ ವಿದ್ಯಾರ್ಥಿ ವೈದ್ಯಕೀಯ ಶಿಕ್ಷಣ ಪಡೆಯಲು ಸರ್ಕಾರ ಮಾಡುತ್ತಿರುವ ತಲಾವಾರು ವೆಚ್ಚವೆಷ್ಟು? (ವಿವರ ನೀಡುವುದು)